# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/16/2020-21 ದಿನಾಂಕ: 05/06/2021.**

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 05/06/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ Deter Committe ಹಾಗೂ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀ ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
4. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ನಾಗಪ್ಪ, ಕಂದಾಯ ವಸೂಲಿಗಾರರು
6. ಶ್ರೀ ಸುರೇಶ್ ಈ.ಎಸ್, ಬಿಬಿಎಂಪಿ ಮಾರ್ಷಲ್
7. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
8. ಶ್ರೀ. ಪ್ರಕಾಶ್, ಸದಸ್ಯರು
9. ಶ್ರೀ ದಯಾಳ್, ಸದಸ್ಯರು
10. ಶ್ರೀ ಮಲ್ಯಾದ್ರಿ, ಸದಸ್ಯರು
11. ಶ್ರೀ ಎಂ ಶ್ರೀನಿವಾಸ್, ಸದಸ್ಯರು

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ದೊಡ್ಡಬೊಮ್ಮಸಂದ್ರ ಸರ್ಕಾರಿ ಶಾಲೆಯಲ್ಲಿ, ರಾಮಚಂದ್ರ ಸರ್ಕಾರಿ ಶಾಲೆಯಲ್ಲಿ ಹಾಗೂ ತಿಂಡ್ಲು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನ್ ಕೇಂದ್ರ ಸ್ಥಾಪಿಸಲಾಗಿದ್ದು, ಸರ್ಕಾರದ ನಿರ್ದೇಶನದಂತೆ 45 ವರ್ಷಕ್ಕಿಂತ ಮೇಲ್ಪಟ್ಟ ಎಲ್ಲರಿಗೂ ಹಾಗೂ 18 ರಿಂದ 44 ವಯಸ್ಸಿನ FLW ರವರುಗಳಿಗೆ ವ್ಯಾಕ್ಸಿನ್ ಹಾಕಿಸಿಕೊಳ್ಳಬೇಕಾಗಿ ಕೋರಿದರು. ಹಾಗೂ ಲಿಸಿಕೆ ನೀಡುವ ಕೇಂದ್ರಗಳ ಮಾಹಿತಿಯನ್ನು ಪ್ರತಿನಿತ್ಯ ವಾಟ್ಸಪ್ ಗ್ರೂಪ್‌ಗಳಲ್ಲಿ ತಿಳಿಸಲಾಗುತ್ತಿರುತ್ತದೆ.
- ಸಾರ್ವಜನಿಕರು ವ್ಯಾಕ್ಸಿನ್ ಪಡೆಯಲು ಜಾಗ್ರತಿ ಮೂಡಿಸಲು ಆಟೋ ಮುಖಾಂತರ ಪ್ರಚಾರ ಮಾಡಲು ಕ್ರಮವಹಿಸಲಾಗಿದೆ

- ವಾರ್ಡ್ ವ್ಯಾಪ್ತಿಯಲ್ಲಿ ಪಾಸಿಟಿವ್ ಕೇಸ್ ದಿನೇದಿನೇ ಕಡಿಮೆಯಾಗುತ್ತಿದ್ದು, ಸಾರ್ವಜನಿರಕು ಇದೇ ರೀತಿ ಸರ್ಕಾರದ ಮಾರ್ಗಸೂಚಿಗಳನ್ನು ಅನುಸರಿಸಲು ತಿಳಿಸಿದರು. ಮತ್ತು ಕಡ್ಡಾಯವಾಗಿ ಮಾಸ್ಕ್‌ಧರಿಸಬೇಕು, ಆಗಾಗ ಕೈತೊಳೆಯಬೇಕು ಹಾಗೂ 6 ಅಡಿ ಅಂತರ ಕಾಪಾಡುವುದು ಅವಶ್ಯಕವಾಗಿರುತ್ತದೆ ಮತ್ತು ಅವಶ್ಯ ಸಂದರ್ಭದಲ್ಲಿ ಮಾತ್ರ ಮನೆಯಿಂದ ಹೊರಗೆ ಬರಬೇಕೆಂದು ತಿಳಿಸಿರುತ್ತಾರೆ. ಎಂದು ಸಭೆಗೆ ತಿಳಿಸಿದರು.

**ಸದಸ್ಯರುಗಳು ಹಾಗೂ ಸಾರ್ವಜನಿಕರು:-** ವಾಡ್ ನಂ 10 ರ ವ್ಯಾಪ್ತಿಯಲ್ಲಿ ವಾರ್ಡಿನ ಪ್ರಮುಖ ಸ್ಥಳಗಳಲ್ಲಿ ಬಿದಿ ಬದಿ ವ್ಯಾಪಾರಿಗಳು ಹಣ್ಣು, ತರಕಾರಿ, ಹಾಲು ಮಾರಾಟಗಾರರಿಗೆ ಸಮಾಜಿಕ ಅಂತರ ಕಾಯ್ದುಕೊಂಡು ವ್ಯಾಪಾರ ನಿರ್ವಹಿಸಲು ಹಾಗೂ ಸದರಿ ವ್ಯಾಪಾರಿಗಳಿಗೆ ಕೋವಿಡ್ ವ್ಯಾಕ್ಸಿನೇಷನ್ ನೀಡಲು ಸರ್ವೆ ಮಾಡಿ ಅಥವಾ ಗುರುತಿಸಿ ಪ್ರತಿಯೊಬ್ಬರನ್ನು ಪಟ್ಟಿ ಮಾಡಿ ಆದ್ಯತೆ ಮೇರೆಗೆ ಲಸಿಕೆ ನೀಡಲು ಕ್ರಮವಹಿಸಲು ಕೋರಿರುತ್ತಾರೆ.

ಅದರಂತೆ, ತಿಂಡ್ಲು ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ವೈದ್ಯಾಧಿಕಾರಿಗಳಾದ ಶ್ರೀಮತಿ ಡಾ॥ ಶೋಭ ನಾಗೇಶ್ ರವರು ಬಿದಿ ಬದಿ ವ್ಯಾಪಾರಿಗಳು ಹಣ್ಣು, ತರಕಾರಿ, ಹಾಲು ಮಾರಾಟಗಾರರನ್ನು ಗುರುತಿಸಿ ಪಟ್ಟಿ ಮಾಡಿ ಸಲ್ಲಿಸುವಂತೆ ಪಾಲಿಕೆಯ ವಾರ್ಡಿನ ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ಸಲ್ಲಿಸುವಂತೆ ತಿಳಿಸಿರುತ್ತಾರೆ. ಪಟ್ಟಿ ಸಲ್ಲಿಸಿದ ಕೂಡಲೇ ವ್ಯಾಕ್ಸಿನೇಷನ್ ನೀಡಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

Sneha .N R
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ನಂ10, ದೊಡ್ಡಬೊಮ್ಮಸಂದ್ರ

5/6/21
ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೆರೆಗಳು) ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.